ಸೋಲಾರ್ ಲೈಟ ವ್ಯವಸ್ಥೆ ಮತ್ತು ಕಂಪ್ಯೂಟರ್, ಟೆಲಿವಿಷನ್, ಗ್ಯಾಸ್ ಸಂಪರ್ಕ ನೀಡುವಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಪಶುವೈದ್ಯ ವಿಶ್ವವಿದ್ಯಾಲಯ ಸ್ಥಾಪಿಸುವುದು

317 (2940) : ಶ್ರೀ ಗೋಪಾಲಕೃಷ್ಣ ಎನ್.ವೈ. (ಮೊಳಕಾಲ್ಮೂರ್) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಶುವೈದ್ಯ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆ ಈಗ ಯಾವ ಹಂತದಲ್ಲಿದೆ;

ಆ) ಈ ವಿಶ್ವವಿದ್ಯಾಲಯ ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇವರ ವಿಳಂಬಕ್ಕೆ ಆಗುತ್ತಿರುವ ಕಾರಣಗಳೇನು?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು)

ಅ) ಪ್ರಕ್ರಿಯೆ ಈಗಾಗಲೇ ಪ್ರಾರಂಭಗೊಂಡಿದೆ.

ಆ) 2003–04ನೆ ಸಾಲಿನ ಆಯವ್ಯಯ ಪತ್ರದಲ್ಲಿ ಮಾನ್ಯ ಮುಖ್ಯಮಂತ್ರಿಯವರು ಈ ಉದ್ದೇಶಕ್ಕಾಗಿ ರೂ. 5.00 ಕೋಟಿ ಹಣವನ್ನು ಮೀಸಲಿಟ್ಟಿರುತ್ತಾರೆ. ಪಶುವೈದ್ಯ ವಿಶ್ವವಿದ್ಯಾಲಯವನ್ನು ಬೀದರ್‌ನಲ್ಲಿ ಸ್ಥಾಪಿಸುವುದಕ್ಕೆ ಸಂಬಂಧಿಸಿದ. ಪ್ರಾರಂಭಿಕ ಪ್ರಕ್ರಿಯೆಗಳನ್ನು ಕೈಗೊಳ್ಳಲು ಸರ್ಕಾರ ಒಬ್ಬ ಹಿರಿಯ ಐ.ಎ.ಎಸ್. ಅಧಿಕಾರಿಯನ್ನು ವಿಶೇಷ ಕರ್ತವ್ಯ ಅಧಿಕಾರಿಯನ್ನಾಗಿ ದಿನಾಂಕ 27.5.2003 ರಂದು ನೇಮಕ ಮಾಡಿದೆ.

ಬೆಳ್ತಂಗಡಿ ತಾಲ್ಲೂಕಿನ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು

318 (2931) : ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಎಷ್ಟು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಿವೆ; ಅವುಗಳಲ್ಲಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ಬೇಡಿಕೆ ಹೆಚ್ಚಿಗೆ ಇರುವುದರಿಂದ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆಯನ್ನು ಹೆಚ್ಚಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವಾಗಿನಿಂದ ಜಾರಿಗೆ ತರಲಾಗುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಮೂರು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿರುತ್ತವೆ. ಈ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಮಂಜೂರಾತಿ ಆಗಿರುವ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ 245.

ಆ) 2003–04ನೇ ಸಾಲಿಗೆ ಒದಗಿಸಲಾಗಿರುವ ಆಯವ್ಯಯದ ಹಿನ್ನೆಲೆಯಲ್ಲಿ ದಕ್ಷಿಣಕನ್ನಡ ಜಿಲ್ಲೆಯಲ್ಲಿನ ಪೋಸ್ಟ್ ಮೆಟ್ರಿಕ್ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆ ಹೆಚ್ಚಿಸುವ ಯೋಜನೆ ಪ್ರಸಕ್ತ ವರ್ಷದಲ್ಲಿ ಇಲ್ಲ.

ಪಿರಿಯಾಪಟ್ಟಣದಲ್ಲಿ ನಿರ್ಮಿಸಲಾಗಿರುವ ಅಂಬೇಡ್ಕರ್ ಭವನದ ಉದ್ಘಾಟನೆ

320 (2755) : ಶ್ರೀ ಹೆಚ್.ಸಿ. ಬಸವರಾಜು (ಪಿರಿಯಾಪಟ್ಟಣ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?